**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಹೊನ್ನಾವರ. ಸಿ.ಸಿ ನಂ.428/2024.**

| | |
|---|---|
| ಪಿರ್ಯಾದುದಾರರುಃ- | ಸೇಂಟ್ ಮಿಲ್ಲಾಗ್ರಿಸ್ ಕ್ರೆಡಿಟ್ ಸೌಹಾರ್ದ ಕೋ-ಆಪರೇಟಿವ್ ಸೊಸೈಟಿ ಲಿ., ಮಂಕಿ ಶಾಖೆ,<br>ಪ್ರತಿನಿಧಿಸುವವರು,<br>ಶ್ರೀ ಅಣ್ಣಪ್ಪ ಮಂಜುನಾಥ ನಾಯ್ಕ,<br>ವಯಸ್ಸು ಸುಮಾರು 37 ವರ್ಷ,<br>ವೃತ್ತಿಃ- ಮ್ಯಾನೇಜರ.<br>ತಾಲೂಕುಃ ಹೊನ್ನಾವರ, (ಉ.ಕ). |

**-ವಿರುದ್ಧ-**

| | |
|---|---|
| ಆರೋಪಿಯ ಹೆಸರುಃ- | ದೇವಿ ರಾಮ ನಾಯ್ಕ,<br>ಸಾಕೀನಃ- ಮಡಿ,<br>ಪೋಸ್ಟಃ ಮಂಕಿ,<br>ತಾಲೂಕುಃ- ಹೊನ್ನಾವರ, (ಉ.ಕ.). |

**ಆಪಾದನೆ**

ಶ್ರೀ ಅನಿಲ್ ಜೋನ್ ಸಿಕ್ವೇರಾ., ಬಿ.ಬಿ.ಎ.,ಎಲ್.ಎಲ್.ಬಿ., ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯಾದ ನಾನು ಆರೋಪಿಯಾದ ನಿಮ್ಮ ಮೇಲೆ ಈ ಕೆಳಕಂಡ ಆಪಾದನೆ ಹೊರಿಸುತ್ತಿದ್ದೇನೆ.

ಪಿರ್ಯಾದಿಯವರ ಸಂಸ್ಥೆಯಲ್ಲಿ ರಾಜೇಶ ರಾಮ ನಾಯ್ಕ ರವರು Business Loan ಇದರ ಖಾತೆ ನಂ.ಬಿ.ಎಲ್-1719 ನೇದರಂತೆ ಸಾಲವನ್ನು ಪಡೆದುಕೊಂಡಿದ್ದು ಇರುತ್ತದೆ, ಸದರಿ ಸಾಲಕ್ಕೆ ಆರೋಪಿಯಾದ ನೀವು ಜಾಮೀನುದಾರರಾಗಿದ್ದು, ಸದ್ರಿ ಸಾಲಕ್ಕೆ ಸಂಬಂಧಪಟ್ಟಂತೆ ನೀವು ಪಿರ್ಯಾದಿ ಸಂಸ್ಥೆಯ ಹೆಸರಿಗೆ ನಿಮ್ಮ ಬ್ಯಾಂಕ್ ಖಾತೆಯುಳ್ಳ **ಕೆನರಾ ಬ್ಯಾಂಕ್., ಮಂಕಿ** ಶಾಖೆಯ ಚೆಕ್ ನಂ.398712 ನ್ನು ದಿನಾಂಕ 05-04-2024 ರಂದು ರೂ. 45,470/- ಎಂದು ನಮೂದಿಸಿ ಚೆಕ್ ಗೆ ಸಹಿ ಮಾಡಿಕೊಟ್ಟು, ಸದರಿ ಚೆಕ್ ನ್ನು ಬ್ಯಾಂಕ್ ಗೆ ಹಾಜರುಪಡಿಸಿದ ಕೂಡಲೇ ಹಣ ಸಿಗುತ್ತದೆ ಎಂದು ಭರವಸೆ ನೀಡಿದ್ದು, ಅದರಂತೆ ಪಿರ್ಯಾದಿಯವರು ಹಣ ಪಡೆಯುವ ಸಲುವಾಗಿ ಸದರಿ ಚೆಕನ್ನು ಅವರ ಸಂಸ್ಥೆಯ ಖಾತೆಯಿರುವ **ದಿ ಹೊನ್ನಾವರ ಅರ್ಬನ್ ಕೊ-**

**ಆಪರೇಟಿವ್ ಬ್ಯಾಂಕ್ ಲಿ., ಮಂಕಿ** ಶಾಖೆಯಲ್ಲಿ ಹಾಜರುಪಡಿಸಿದಾಗ, ಸದರಿ ಬ್ಯಾಂಕ್ ನವರು, 'Cheque Destroyed' ಎಂದು ತಿಳಿಸಿ ಸದರಿ ಚೆಕನ್ನು ದಿನಾಂಕ 08-04-2024 ರಂದು ಮೆಮೋದೊಂದಿಗೆ ವಾಪಾಸ್ ನೀಡಿರುತ್ತಾರೆ. ಈ ಕುರಿತು ಪಿರ್ಯಾದಿಯವರು ನಿಮಗೆ ವಕೀಲರ ಮೂಲಕ ದಿನಾಂಕ 19-04-2024 ರಂದು ರಿಜಿಸ್ಟರ್ ನೋಟಿಸ್ ಕಳುಹಿಸಿದ್ದು, ಸದರಿ ನೋಟಿಸ್‌ನ್ನು ಆರೋಪಿಯಾದ ನೀವು ಸ್ವಿಕರಿಸದೇ ದಿನಾಂಕ 22-04-2024 ರಂದು ನಿಮಗೆ ಜಾರಿಯಾಗಿದ್ದರೂ ಸಹ ನೀವು ಸದರಿ ಚೆಕ್ ನಲ್ಲಿ ನಮೂದಿಸಿದ ಹಣವನ್ನು ಸಹ ನೀಡದೇ ನೆಗೋಶಿಯೇಬಲ್ ಇನ್ ಸ್ಟ್ರುಮೆಂಟ್ ಕಾಯಿದೆ ಕಲಂ. 138 ರಡಿಯಲ್ಲಿ ಶಿಕ್ಷಾರ್ಹ ಅಪರಾಧ ಮಾಡಿರುತ್ತೀರೆಂದು ಆರೋಪಿಸಲಾಗಿದೆ.

ಪ್ರಶ್ನೆ1: ಈಗ ನಿಮಗೆ ಓದಿ ಹೇಳಿದ ಆಪಾದನೆ ತಿಳಿಯಿತೇ?

ಆರೋಪಿಯ ಉತ್ತರ : ತಿಳಿಯಿತು

ಪ್ರಶ್ನೆ 2: ಷದ್ರಿ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೇ?

ಆರೋಪಿಯ ಉತ್ತರ : ವಿಚಾರಣೆಯಾಗಬೇಕು

( ಈ ಮೂಲಕ ಪ್ರಮಾಣಿಸುವುದೇನೆಂದರೆ ಆರೋಪಿಯು ಕೊಟ್ಟಂತ ಹೇಳಿಕೆಯ ಉತ್ತರವನ್ನು ಪಡೆಯಲಾಗಿದೆ )

ಸಹಿ ಇದೆ/-

**ದಿನಾಂಕಃ- 15-09-2025.**

**(ಅನಿಲ್ ಜೋನ್ ಸಿಕ್ವೇರಾ)**
**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಮ್.ಎಫ್.ಸಿ., ಯವರ ನ್ಯಾಯಾಲಯ., ಹೊನ್ನಾವರ.**

ಆರೋಪಿಯ ಸಹಿಃ-ಸಹಿ ಇದೆ

****